**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 352 |
| ಸದಸ್ಯರ ಹೆಸರು | : | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 15.09.2022. |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಅಧ್ಯಕ್ಷ/ಉಪಾಧ್ಯಕ್ಷರು ಮತ್ತು ಸದಸ್ಯರನ್ನು ತೆಗೆದು ಹಾಕುವ ಪ್ರಕ್ರಿಯೆ) ನಿಯಮಗಳಿಗೆ ಬದಲಾವಣೆಗಳನ್ನು ತರುವ ಉದ್ದೇಶದಿಂದ ಇತ್ತೀಚಿಗೆ ಹೊರಡಿಸಿರುವ ಕರಡು ಅಧಿಸೂಚನೆಗೆ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳಿಂದ ಮತ್ತು ಸ್ಥಳೀಯ ಸಂಸ್ಥೆಗಳಿಂದ ಆಯ್ಕೆಯಾಗಿರುವ ವಿಧಾನ ಪರಿಷತ್ ಸದಸ್ಯರಿಂದ ವ್ಯಾಪಕ ವಿರೋಧ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| (ಆ) | ಬಂದಿದ್ದಲ್ಲಿ, ಈ ಕರಡು ಅಧಿನಿಯಮವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆಯ ಪ್ರಕರಣ 310–ಎ ಪ್ರಕಾರ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿರುವ ರಾಜ್ಯ ಪಂಚಾಯಿತಿ ಪರಿಷತ್ ಹೆಸರಿನ ಉನ್ನತ ಮಟ್ಟದ ಸಮಿತಿಯು ಪರಿಶೀಲಿಸಿ ಈ ಕರಡು ಅಧಿನಿಯಮಗಳಿಗೆ ಅಗತ್ಯ ಬದಲಾವಣೆ ಅಥವಾ ತಿದ್ದುಪಡಿಗಳನ್ನು ಮಾಡಲು ಅನುಮೋದನೆ ನೀಡಿದೆಯೇ: (ಮಾಹಿತಿ ನೀಡುವುದು) | ಇಲ್ಲ.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 310–ಎ ರಲ್ಲಿ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಸುಧಾರಿಸುವ ಸಲುವಾಗಿ ಹಾಗೂ ಅದು ಜನತೆಯ ಅವಶ್ಯಕತೆಗಳಿಗೆ ತೀವ್ರವಾಗಿ ಸ್ಪಂದಿಸುವಂತೆ ಮಾಡುವ ಸಲುವಾಗಿ, ಚುನಾಯಿತ ಪ್ರತಿನಿಧಿಗಳು ತಮ್ಮ ಆಶಯಗಳನ್ನು ವ್ಯಕ್ತಪಡಿಸುವುದಕ್ಕೆ ಮತ್ತು ತಮ್ಮ ಸಲಹೆಗಳನ್ನು ಸೂಚಿಸುವುದಕ್ಕೆ ಒಂದು ವೇದಿಕೆಯಾಗಿ ಕಾರ್ಯನಿರ್ವಹಿಸಲು ರಾಜ್ಯ ಪಂಚಾಯತ್ ಪರಿಷತ್‌ನ್ನು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ರಚಿಸಲು ಅವಕಾಶವಿರುತ್ತದೆ.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 311 ರಲ್ಲಿ ಸರ್ಕಾರವು ನಿಯಮಗಳನ್ನು ರಚಿಸಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಹಿಂದಿನ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಂದ ಕರಡು ನಿಯಮಗಳಿಗೆ ಅನುಮೋದನೆ ಪಡೆದು, ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. |
| (ಇ) | ಈ ಕರಡು ಅಧಿಸೂಚನೆಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರನ್ನು ವಜಾಗೊಳಿಸುವ ಪ್ರಕ್ರಿಯೆಗೆ ಸಂಬಂಧಿಸಿದ ದೂರು ದಾಖಲಿಸಿರುವ ಮತ್ತು ತನಿಖೆ ನಡೆಸಿ ವರದಿ ನೀಡುವ ಅಧಿಕಾರವನ್ನು ರಾಜ್ಯ ಸರ್ಕಾರದ ಹಂತದಿಂದ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯ ಹಂತಕ್ಕೆ ಇಳಿಸುವ ಬದಲು ಈ ಪ್ರಕ್ರಿಯೆಯು ಮೊದಲಿನಂತೆ ರಾಜ್ಯ ಸರ್ಕಾರದ ಮಟ್ಟದಲ್ಲಿ ಮುಂದುವರಿಸಲು ಮತ್ತು ಈ ಪ್ರಕ್ರಿಯೆಯನ್ನು ಇನ್ನಷ್ಟು ನಿಷ್ಪಕ್ಷಪಾತವಾಗಿ ಬಳಸಲು ಅಗತ್ಯವಿರುವ ನಿಯಮಗಳನ್ನು ಸರ್ಕಾರ ರೂಪಿಸುವುದೇ? (ಮಾಹಿತಿ ನೀಡುವುದು) | ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 597 ಗ್ರಾಪಂಅ 2020, ದಿನಾಂಕ:27–07–2022 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರನ್ನು ತೆಗೆದು ಹಾಕುವ ಪ್ರಕ್ರಿಯೆ) ನಿಯಮಗಳು, 2022 ರ ಕರಡನ್ನು ದಿನಾಂಕ:03–08–2022 ರ ಕರ್ನಾಟಕ ರಾಜ್ಯ ಪತ್ರದ ಭಾಗ–4ಎ ರಲ್ಲಿ ಪ್ರಕಟಿಸಿ ಬಾಧಿತರಾಗುವ ವ್ಯಕ್ತಿಗಳು ಯಾವುದೇ ಆಕ್ಷೇಪಣೆ ಮತ್ತು ಸಲಹೆಗಳನ್ನು ಸರ್ಕಾರಕ್ಕೆ ಸಲ್ಲಿಸಲು ತಿಳಿಸಲಾಗಿದ್ದು, ಅದರಂತೆ ಆಕ್ಷೇಪಣೆ ಮತ್ತು ಸಲಹೆಗಳು ಸ್ವೀಕೃತವಾಗಿದ್ದು, ನಿಯಮಾನುಸಾರ ಪರಿಶೀಲಿಸಿ ಕರಡು ನಿಯಮಗಳನ್ನು ಅಂತಿಮಗೊಳಿಸಲು ಕ್ರಮ ವಹಿಸಲಾಗುವುದು. |

ಸಂಖ್ಯೆ: ಗ್ರಾಅಪ 270 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ